ದಾವಣಗೆರೆ ನಗರದಲ್ಲಿ ಲೋಕಪಯೋಗಿ ಇಲಾಖೆಯ ವಿಭಾಗೀಯ ಕಛೇರಿ ಪಾರ್ರಂಭಿಸುವುದು

2894 (4017)

ಶ್ರೀ ಎಸ್.ಎಸ್.ಮಲ್ಲಿಕಾರ್ಜುನ (ದಾವಣಗೆರೆ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಾವಣಗೆರೆ ನಗರದಲ್ಲಿ ಲೋಕೋಪಯೋಗಿ ಇಲಾಖೆಯ ವಿಭಾಗೀಯ ಕಛೇರಿ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದವರ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದಲ್ಲಿ, ಅದನ್ನು ಯಾವಾಗ ಮಂಜೂರ್ಮಾಡಿ ಪ್ರಾರಂಭಿಸಲಾಗುವುದು?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು):

ಅ) ಹೌದು

ಆ) ಸದ್ಯದಲ್ಲಿಯೇ ಪ್ರಾರಂಭಿಸಲಾಗುವುದು.

ದಾವಣಗೆರೆ ಕ್ಷೇತ್ರಕ್ಕೆ ನಬಾರ್ಡ್ ಸಹಾಯದಿಂದ ಕೈಗೊಳ್ಳಲಾದ ಕಾಮಗಾರಿಗಳು.

2895:(4018)

ಶ್ರೀ ಎಸ್.ಎನ್.ಮಲ್ಲಿಕಾರ್ಜುನ (ದಾವಣಗೆರೆ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ನಬಾರ್ಡ್ ಸಹಾಯದಿಂದ ಕೈಗೊಳ್ಳಲಾದ ಕಾಮಗಾರಿಗಳಾವುವು?

ಆ) ಕಳೆದ ನಾಲ್ಕು ವರ್ಷಗಳಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು? (ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು)

ಇ) ದಾವಣಗೆರೆ ವಿಧಾನ ಸಭಾ ಕ್ಷೇತ್ರದಲ್ಲಿ ನಬಾರ್ಡ್ ನೆರವಿನಿಂದ ಕೈಗೊಂಡಿರುವ ಕಾಮಗಾರಿಗಳು ಯಾವುವು? ಹಾಗೂ ಸರ್ಕಾರದ ಮುಂದೆ ಇರುವ ಪ್ರಸ್ತಾವನೆಗಳು ಎಷ್ಟು? (ವಿವರ ನೀಡುವುದು)

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು):

ಅ) ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಡಿ ರಸ್ತೆ ಮತ್ತು ಸೇತುವೆ

ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ.

ಅ) ಲೋಕೋಪಯೋಗಿ ಇಲಾಖೆಯಡಿ ರಸ್ತೆ ಮತ್ತು ಸೇತುವೆ ಕಾಮಗಾರಿಗಳಿಗೆ 96-97 97-98 ಹಾಗೂ 98-99 ಸಾಲಿನಲ್ಲಿ ಮಂಜೂರಾತಿ ದೊರೆತಿದ್ದು, ಸದರಿ ಕಾಮಗಾರಿಗಳ ಕ್ಷೇತ್ರವಾರು ಸಂಕ್ಷಿಪ್ತ ವಿವರಗಳನ್ನು ಅನಬಂಧ 'ಅ'ನಲ್ಲಿ ನೀಡಿದೆ. (ಪ್ರಶ್ನೆ ಸಂಖ್ಯೆ 4029ಕ್ಕೆ ನೀಡಿದೆ)

ಇ) ದಾವಣಗೆರೆ ವಿಧಾನ ಸಭಾ ಕ್ಷೇತ್ರದಲ್ಲಿ ದಾವಣಗೆರೆ ಶಾಂತಿಸಾಗರ ರಸ್ತೆಯು ಭಾಗಶಃ ಆರ್.ಐ.ಡಿ.ಎಫ್-2 ರಡಿ ಮಂಜೂರಾಗಿದೆ. ಹಾಗೂ ಆರ್.ಐ.ಡಿ.ಎಫ್-4 ರಡಿ ಸರ್ಕಾರವು 35.00 ಲಕ್ಷ ರೂ.ಗಳ ಮೊತ್ತದಲ್ಲಿ ದಾವಣಗೆರೆ ಮಲ್ಲಗೊಂಡನ ಹಳ್ಳಿ ರಸ್ತೆಯ ಒಂದು ಕಾಮಗಾರಿಯನ್ನು ಗುರುತಿಸಿದೆ.

ದಾವಣಗೆರೆಯಲ್ಲಿ ಜಿಲ್ಲಾ ನ್ಯಾಯಲಯ ಪ್ರಾರಂಭ.

2896:(4019)

ಶ್ರೀ ಎಸ್.ಎಸ್.ಮಲ್ಲಿಕಾರ್ಜುನ (ದಾವಣಗೆರೆ): ಮಾನ್ಯ ಕಾನೂನು ಸಂಸದೀಯ ವ್ಯವಹಾರ ಶಾಸನ ರಚನೆ ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಾವಣಗೆರೆ ಜಿಲ್ಲಾ ನ್ಯಾಯಾಲಯವಿಲ್ಲದೆ ದಾವಣಗೆರೆ ಜಿಲ್ಲಾ ಸೇರಿದ ಹರಪನಹಳ್ಳಿ ತಾಲ್ಲೂಕಿನ ಜನರು ಬಳ್ಳಾರಿಗೆ ಚೆನ್ನಗಿರಿ ಹೊನ್ನಾಳಿ ತಾಲ್ಲೂಕಿನ ಜನರು ಶಿವಮೊಗ್ಗಕ್ಕೆ ದಾವಣಗೆರೆ ಜಗಳೂರು ಮತ್ತು ಹರಿಹರ ತಾಲ್ಲೂಕಿನ ಜನರು ಚಿತ್ರದುರ್ಗಕ್ಕೆ ನ್ಯಾಯಾಲಯ ಕೆಲಸಗಳಿಗಾಗಿ ಹೋಗಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಅಲ್ಲಿ ಜಿಲ್ಲಾ ನ್ಯಾಯಾಲಯವನ್ನು ಯಾವಾಗ ಪ್ರಾರಂಭಿಸಲಾಗುವುದು?

ಇ) ಯಾವ ಯಾವ ನ್ಯಾಯಾಲಯಗಳನ್ನು ಪ್ರಾರಂಭಿಸಲಾಗುವುದು? (ವಿವರವಾಗಿ ತಿಳಿಸುವುದು)

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಸಚಿವರು):

ಅ) ಹೌದು.